Akashvani: Bangalore

Regional Bulletin In Kannada

15.08.2025 : 14.30hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

15.08.2025 : 14.30hrs

*******

ಮುಖ್ಯಾಂಶಗಳು

- ಶಾಲಾ ಮಕ್ಕಳಿಗೆ 'ಮೊಬೈಲ್ ಬಿಡಿ ಪುಸ್ತಕ ಹಿಡಿ' ಅಭಿಯಾನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
- ಬೆಂಗಳೂರಿನ ಆಡುಗೋಡಿಯಲ್ಲಿ ಅನಿಲ ಸಿಲಿಂಡರ್ ಸ್ಫೋಟ ; ಓರ್ವ ಸಾವು, ೯ ಜನರಿಗೆ ಗಾಯ
- ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ ; ಜಿಲ್ಲಾ ಉಸ್ತುವಾರಿ ಸಚಿವರುಗಳಿಂದ ಧ್ವಜಾರೋಹಣ
- ಕೇಂದ್ರದಿಂದ ಹಂಚಿಕೆ ಮಾಡಿರುವ ಯೂರಿಯಾ ಪೂರೈಕೆ ಮಾಡುವಂತೆ ಸಚಿವ ಚಲುವರಾಯಸ್ವಾಮಿ ಒತ್ತಾಯ

*******

ಶಾಲಾ ಮಕ್ಕಳಿಗೆ 'ಮೊಬೈಲ್ ಬಿಡಿ ಪುಸ್ತಕ ಹಿಡಿ' ಅಭಿಯಾನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನದಲ್ಲಿಂದು ನಡೆದ ೭೯ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಹಾಗೂ ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ಹೊಸ ತಲೆಮಾರಿನ ಮಕ್ಕಳು ಖಿನ್ನತೆ, ಆತಂಕ, ದ್ವೇಷದ ಭಾವನೆಯಿಂದ ಬಳಲುತ್ತಿದ್ದು, ಇದರ ನಿವಾರಣೆಗೆ ಹೊಸದಾರಿ ಕಂಡುಕೊಳ್ಳಬೇಕಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಕರ್ನಾಟಕದ ಪಾತ್ರ ಕುರಿತ ಇತಿಹಾಸದ ಮೆಲುಕು ಹಾಕಿದ ಅವರು, ಎಲ್ಲಾ ಸ್ವಾತಂತ್ರ್ಯ ಯೋಧರನ್ನು ಸ್ಮರಿಸಿದ್ದಾರೆ. ಗ್ಯಾರಂಟಿ ಯೋಜನೆಗಳು ರಾಜ್ಯದ ಅಭಿವೃದ್ಧಿಯ ದಿಕ್ಕನ್ನೇ ಬದಲಿಸುತ್ತಿದ್ದು, ದೇಶದಲ್ಲೇ ರಾಜ್ಯದ ಜನರ ತಲಾದಾಯ ಹೆಚ್ಚಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕಳೆದ ೨ ವರ್ಷಗಳಲ್ಲಿ ರಾಜ್ಯದ ಅಭಿವೃದ್ಧಿ ಮಾದರಿಗೆ ೨೫ಕ್ಕಿಂತ ಹೆಚ್ಚಿನ ಪ್ರಶಸ್ತಿ ಪುರಸ್ಕಾರಗಳು ಲಭಿಸಿವೆ ಎಂದು ಹೇಳಿದ್ದಾರೆ. ಬಳಿಕ ಬಿಎಸ್‌ಎಫ್, ಕೆಎಸ್‌ಆರ್‌ಪಿ, ಗೋವಾ ಪೊಲೀಸರ ಪಥ ಸಂಚಲನ ಸೇರಿದಂತೆ ಶಾಲಾ ಮಕ್ಕಳಿಂದ ಬ್ಯಾಂಡ್ ಹಾಗೂ ನೃತ್ಯ ಪ್ರದರ್ಶನ ನಡೆಯಿತು.

*********

ಬೆಂಗಳೂರಿನ ಆಡುಗೋಡಿಯ ಚಿನ್ನಯ್ಯನಪಾಳ್ಯದಲ್ಲಿ ಅನಿಲ ಸಿಲಿಂಡರ್ ಸ್ಫೋಟಗೊಂಡು ಓರ್ವ ಸಾವನ್ನಪ್ಪಿದ್ದು, ೯ ಜನ ತೀವ್ರವಾಗಿ ಗಾಯಗೊಂಡಿದ್ದಾರೆ. ವಿಕ್ಟೋರಿಯಾ, ಮಲ್ಲಿಗೆ, ಸಂಜಯಗಾಂಧಿ, ನಿಮ್ಹಾನ್ಸ್ ಆಸ್ಪತ್ರೆಗಳಿಗೆ ಸೇರಿಸಲಾಗಿದೆ. ಸ್ಥಳಕ್ಕೆ ಭೇಟಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಫೋಟದಲ್ಲಿ ಸಾವನ್ನಪ್ಪಿರುವ ಮುಬಾರಕ್ ಅವರ ಕುಟುಂಬದವರಿಗೆ ೫ ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಗಾಯಾಳುಗಳಿಗೆ ಸರ್ಕಾರದ ವತಿಯಿಂದ ಉಚಿತ ಚಿಕಿತ್ಸೆ ನೀಡಲಾಗುವುದು ಎಂದು ತಿಳಿಸಿದ್ದಾರೆ. ಘಟನೆಯಲ್ಲಿ ೧೩ ಮನೆಗಳಿಗೆ ಹಾನಿಯಾಗಿದ್ದು, ಅವುಗಳನ್ನು ಬಿಬಿಎಂಪಿ ವತಿಯಿಂದ ದುರಸ್ಥಿ ಮಾಡಲಾಗುವುದು. ಪೂರ್ತಿ ಹಾನಿಯಾದ ಮನೆಗಳನ್ನು ಹೊಸದಾಗಿ ಕಟ್ಟಿಕೊಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೨೨ ಸೆಕೆಂಡ್‌ಗಳು)

ತುಮಕೂರು ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ನಡೆದ ೭೯ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ರಾಜ್ಯದಲ್ಲಿನ ಬಡ ಜನರ ಉದ್ಧಾರಕ್ಕಾಗಿ ರಾಜ್ಯ ಸರ್ಕಾರ ಪಂಚ ಗ್ಯಾರೆಂಟಿಗಳ ಮೂಲಕ ಜನರಿಗೆ ಆರ್ಥಿಕ ಸ್ವಾತಂತ್ರ್ಯ ದೊರಕಿಸಲು ಸರ್ಕಾರ ಶ್ರಮಿಸುತ್ತಿದೆ ಎಂದು ತಿಳಿಸಿದರು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಪಾಲಿಕೆ ಕೇಂದ್ರ ಕಛೇರಿಯ ಆವರಣದಲ್ಲಿ ಆಡಳಿತಗಾರ ತುಷಾರ್ ಗಿರಿ ನಾಥ್ ಹಾಗೂ ಮುಖ್ಯ ಬಿಬಿಎಂಪಿ ಆಯುಕ್ತ ಮಹೇಶ್ವರ್ ರಾವ್ ಧ್ವಜಾರೋಹಣ ನೆರವೇರಿಸಿದರು. ಸ್ವಾತಂತ್ರ್ಯ ಎಂದರೆ ಕೇವಲ ರಾಜಕೀಯ ಸ್ವಾತಂತ್ರ್ಯವಲ್ಲ ಅದು ಹೊಣೆಗಾರಿಕೆಯೂ ಆಗಿದೆ ಎಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಹೇಳಿದರು. ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿಂದು ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತಿದ್ದರು. ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ, ಸೇರಿದಂತೆ ಹಲವರು ಉಪಸ್ಥಿತರಿದ್ದರು.ಕೋಲಾರದ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ನಗರಾಭಿವೃದ್ಧಿ ಹಾಗೂ ನಗರಯೋಜನೆ ಸಚಿವ ಬಿ.ಎಸ್.ಸುರೇಶ್ ಧ್ವಜಾರೊಹಣ ನೆರವೇರಿಸಿದರು. ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚೆಲುವರಾಯಸ್ವಾಮಿ ಸರ್.ಎಂ ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಕನ್ನಡಿಗರ ಪಾತ್ರ ದೊಡ್ಡದ್ದು, ಕಿತ್ತೂರು ರಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ,

ಗಂಗಾಧರ ರಾವ್ ದೇಶ ಪಾಂಡೆ, ನಿಜಲಿಂಗಪ್ಪ ಸೇರಿದಂತೆ ಹಲವರನ್ನು ಇಂದು ನಾವು ನೆನೆಸಿಕೊಳ್ಳಬೇಕಿದೆ ಎಂದು ಹೇಳಿದರು. ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಧ್ವಜಾರೋಹಣ ನೆರವೇರಿಸಿದರು. ವಿವಿಧ ಪಡೆಗಳ ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ಪ್ರಸಕ್ತ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಸಮುದಾಯ ಮತ್ತು ಸಾಮಾನ್ಯ ವಿದ್ಯಾರ್ಥಿಗಳಿಗೆ ನವದೆಹಲಿಯಲ್ಲಿ ಯುಪಿಎಸ್‌ಸಿ ಹಾಗೂ ಇತರ ಉನ್ನತ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲು ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ತರಬೇತಿ ಕಟ್ಟಡ ನಿರ್ಮಿಸಲಾಗುವುದು ಎಂದು ಹೇಳಿದರು. ದಕ್ಷಿಣ ಕನ್ನಡ ಜಿಲ್ಲಾಡಳಿತದ ವತಿಯಿಂದ ಇಂದು ೭೯ನೆಯ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮ ಸಡಗರದಿಂದ ಆಚರಿಸಲಾಯಿತು. ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಧ್ವಜಾರೋಹಣ ನೆರವೇರಿಸಿ ಗೌರವ ವಂದನೆ ಸ್ವೀಕರಿಸಿದ ಬಳಿಕ ಸ್ವಾತಂತ್ರ್ಯೋತ್ಸವ ಸಂದೇಶದಲ್ಲಿ ದೇಶದ ಪ್ರತಿಯೊಬ್ಬ ಪ್ರಜೆಯೂ ಸಂಭ್ರಮಿಸಬೇಕಾದ ದಿನವಿದು. ದೇಶದ ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಸ್ವಾತಂತ್ರ್ಯ ಹೋರಾಟಗಾರರನ್ನು ನೆನಪಿಸಿಕೊಳ್ಳಬೇಕು ಎಂದು ತಿಳಿಸಿದರು.

ವಿಜಯಪುರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಧ್ವಜಾರೋಹಣ ನೆರವೇರಿಸಿ ನಂತರ ತೆರೆದ ವಾಹನದಲ್ಲಿ ಪೆರೇಡ್ ತಂಡಗಳ ಪರಿವೀಕ್ಷಣೆ ನಡೆಸಿದರು. ಪರೇಡ್ ತುಕಡಿಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು. ಪಥಸಂಚಲನದಲ್ಲಿ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆ, ಐಆರ್ ಬಿ ಪೊಲೀಸ್ ಪಡೆದ ಗೃಹರಕ್ಷಕ ದಳ, ಅರಣ್ಯ ಇಲಾಖೆ, ಅಗ್ನಿಶಾಮಕ ಇಲಾಖೆ, ಸೈನಿಕ ಶಾಲೆ, ಎನ್‌ಸಿಸಿ ಸೀನಿಯರ್ ಡಿವಿಜನ್, ಪೊಲೀಸ್ ವಾದ್ಯ ವೃಂದ ಸೇರಿದಂತೆ ಹಾಗೂ ವಿವಿಧ ಶಾಲಾ ಕಾಲೇಜು ತಂಡಗಳು ಭಾಗವಹಿಸಿದ್ದವು. ರಾಮನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ, ಧ್ವಜಾರೋಹಣ ನೆರವೇರಿಸಿ ಗೌರವ ವಂದನೇ ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ಶಾಲಾ-ಕಾಲೇಜು ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿತ್ತು. ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ, ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನದ ಫಲವಾಗಿ ಸ್ವಾತಂತ್ರ್ಯವನ್ನುಗಳಿಸಿದ್ದು ಅತ್ಯಮೂಲ್ಯವಾದ ಈ ಸ್ವಾತಂತ್ರ್ಯವನ್ನು ರಕ್ಷಿಸುವ ಸಂಕಲ್ಪ ಮಾಡಬೇಕು ಎಂದರು ಹೇಳಿದರು. ಹಾಸನ ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ಹಮ್ಮಿಕೊಂಡಿದ್ದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ

ಮಾತನಾಡಿ, ದೇಶಕ್ಕೆ ಬಹಳ ಸಂಘರ್ಷದ ನಂತರ ಸ್ವಾತಂತ್ರ್ಯ ಬಂದಿರುವುದು ಭಾರತೀಯರು ಸದಾ ಸ್ಮರಣೆಯಲ್ಲಿಟ್ಟುಕೊಳ್ಳಬೇಕು ಎಂದು ತಿಳಿಸಿದರು. ಗದಗ ಜಿಲ್ಲಾಡಳಿತದಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿದ ಕೆ.ಎಚ್ ಪಾಟೀಲ್, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರಗಳನ್ನು ಸ್ಮರಿಸುವುದು ಮತ್ತು ಅವರಿಗೆ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದ್ದಾರೆ. ಕಲಬುರಗಿಯ ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾ ಉಸ್ತುವಾರಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಇದೇ ಸಂದರ್ಭದಲ್ಲಿ ಕಲಬುರಗಿಯ ಶ್ರೀ ಶರಣಬಸವೇಶ್ವರ ಸಂಸ್ಥಾನದ ೮ನೆಯ ಡಾ. ಶರಣಬಸವಪ್ಪ ಅಪ್ಪಾಜಿ ಅವರು ಲಿಂಗೈಕ್ಯರಾದ ಹಿನ್ನೆಲೆಯಲ್ಲಿ ಗೌರವ ಸೂಚಕವಾಗಿ ಮೌನಾಚರಣೆ ಮಾಡಲಾಯಿತು.

********

ಪ್ರಸಕ್ತ ಸಾಲಿನಲ್ಲಿ ಕೇಂದ್ರ ಹಂಚಿಕೆ ಮಾಡಿರುವಷ್ಟು ಪ್ರಮಾಣದ ರಸಗೊಬ್ಬರ ಬಾರದೆ ರಾಜ್ಯದಲ್ಲಿ ಯುರಿಯಾ ಕೊರತೆಯಾಗಿದ್ದು, ಅತ್ಯಂತ ತ್ವರಿತವಾಗಿ ೨.೯೭ ಲಕ್ಷ ಮೆಟ್ರಿಕ್ ಟನ್ ಪೂರೈಕೆ ಮಾಡುವಂತೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ರವರು  ಎಲ್ಲಾ ರಾಜ್ಯಗಳ ಕೃಷಿ ಸಚಿವರೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಪಾಲ್ಗೊಂಡು ರಾಜ್ಯದಲ್ಲಿ ಸರಬರಾಜು ಕೊರತೆಯಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಸವಿವರವಾಗಿ ಗಮನ ಸೆಳೆದು ಶೀಘ್ರ ಬಾಕಿ ಪೂರೈಕೆಗೆ ಬೇಡಿಕೆ ಸಲ್ಲಿಸಿದರು.

****END****